# ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

## ಸಿ.ಸಿ.1462/2024

ಸಾಕ್ಷಿದಾರರ ಹೇಳಿಕೆಃ

| | | |
|---|---|---|
| ಹೆಸರು | : | ಬಸವಲಿಂಗಪ್ಪ ಚಿಮ್ಮಲಗಿ ಚಾಸಾಃ **1** ಫ್ರಾಸಾಃ **3** |
| ತಂದೆಯ ಹೆಸರು | : | ನಂಜಪ್ಪ |
| ವಯಸ್ಸು | : | **51** ವರ್ಷ |
| ವೃತ್ತಿ | : | ಅಬಕಾರಿ ನಿರೀಕ್ಷಕರು |
| ವಾಸಸ್ಥಳ | : | ಬಾಗಲಕೋಟೆ |

ದಿನಾಂಕಃ **06-03-2026** ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಬೋಧಿಸಲಾಯಿತು.

ಸಾಕ್ಷಿಯ ಹೇಳಿಕೆಯನ್ನು video conference ಮೂಲಕ ತೆಗೆದುಕೊಳ್ಳಲಾಯಿತು.

ಮುಖ್ಯ ವಿಚಾರಣೆ :-ಮಾನ್ಯ ಸ.ಸ.ಅ. ರವರಿಂದಃ

ನಾನು ಫೆಬ್ರವರಿ 2022 ರಿಂದ ಸೆಪ್ಟೆಂಬರ್ 2025 ರವರೆಗೆ ಹೊನ್ನಾಳಿ ವಲಯದಲ್ಲಿ ಅಬಕಾರಿ ಉಪ ನಿರೀಕ್ಷಕರಾಗಿ ಕರ್ತವ್ಯ ನಿರ್ವಹಿಸಿದ್ದೆನು.

ದಿನಾಂಕಃ 26-02-2024 ರಂದು ಸಂಜೆ 05-30 ಗಂಟೆ ಸಮಯದಲ್ಲಿ ನಾನು ಚಾಸಾ-4 ರವರ ಜೊತೆಯಲ್ಲಿ ಬೆಳಗುತ್ತಿ ಗ್ರಾಮದ ಬಸ್ ನಿಲ್ದಾಣದ ಬಳಿ ಗಸ್ತು ಮಾಡುತ್ತಿದ್ದಾಗ ಮಲ್ಲಿಗೇನಹಳ್ಳಿ ಗ್ರಾಮದ ಶರತ್ ಡಿ ಹೆಚ್ ಬಿನ್ ಹನುಮಂತಪ್ಪ ಎಂಬುವವರು ಅಕ್ರಮವಾಗಿ ಮದ್ಯವನ್ನು ಇಟ್ಟುಕೊಂಡು ಸಾಗಾಣಿಕೆ ಮಾಡುತ್ತಿದ್ದಾರೆ ಎಂದು

ಖಚಿತ ಮಾಹಿತಿ ಬಂದ ಮೇರೆಗೆ ಬೆಳಗುತ್ತಿ ಗ್ರಾಮದ ಬಸ್ ನಿಲ್ದಾಣದ ಬಳಿ ಇದ್ದ ಚಾಸಾ-2 ಮತ್ತು 3 ರವರಿಗೆ ಸದರಿ ಮೇಲ್ಕಂಡ ಮಾಹಿತಿಯನ್ನು ತಿಳಿಸಿ ನಂತರ ನಾನು ಚಾಸಾ-2 ಮತ್ತು 3 ರವರಿಗೆ ನೋಟೀಸನ್ನು ಜಾರಿ ಮಾಡಿ ಅವರನ್ನು ನಮ್ಮ ಇಲಾಖೆಯ ಜೀಪಿನಲ್ಲಿ ಮಾಹಿತಿ ಬಂದ ಸ್ಥಳಕ್ಕೆ ಹೋಗಿ ನೋಡಲಾಗಿ ಸದರಿ ವ್ಯಕ್ತಿಯು ನಮ್ಮನ್ನ ನೋಡಿ ಓಡಿ ಹೋಗಲು ಪ್ರಯತ್ನಿಸಿದರು ಆ ಸಮಯದಲ್ಲಿ ನಾನು ಮತ್ತು ಚಾಸಾ-4 ರವರು ಸದರಿ ವ್ಯಕ್ತಿಯನ್ನು ಹಿಡಿಯಲು ಪ್ರಯತ್ನಿಸಿದರು ಸದರಿ ವ್ಯಕ್ತಿ ಸಿಕ್ಕಿರುವುದಿಲ್ಲ. ನಂತರ ಸ್ಥಳೀಯವರನ್ನು ಅವನ ಹೆಸರು ಮತ್ತು ವಿಳಾಸವನ್ನು ಕೇಳಲಾಗಿ ಶರತ್ ಬಿ ಹೆಚ್ ಬಿನ್ ಹನುಮಂತಪ್ಪ ಎಂದು ತಿಳಿಸಿದನು. ನಂತರ ಸದರಿ ಚೀಲವನ್ನು ಪರಿಶೀಲನೆ ಮಾಡಲು ಶೋಧನಾ ಸಮುಚ್ಚಿತ ವಾರೆಂಟನ್ನು ನಾನು ತಯಾರಿಸಿ ನಂತರ ಸ್ಥಳದಲ್ಲಿದ್ದ ಬಿಳಿ ಬಣ್ಣದ ಪ್ಲಾಸ್ಟೀಕ್ ಚೀಲವನ್ನು ಪರಿಶೀಲಿಸಿ ನೋಡಲಾಗಿ ಅದರಲ್ಲಿ 90 ಎಂ ಎಲ್ ನ ಹೈವರ್ಸ್ಡ್ ಚಿಯರ್ಸ್ ವಿಸ್ಕಿಯ 96 ಟೆಟ್ರಾ ಪ್ಯಾಕೇಟ್ ಗಳು ಇದ್ದವು. ನಂತರ ನಾನು ಸದರಿ ಮದ್ಯದ ಪೌಚ್ ಗಳನ್ನು ಅಮಾನತ್ತು ಪಡಿಸಿಕೊಳ್ಳಲು ಅಮಾನತ್ತು ಮಹಜರ್ ಕ್ರಮವನ್ನು ನಾನು, ಚಾಸಾ-2 ರಿಂದ 4 ರವರ ಸಮಕ್ಷಮ ಸಂಜೆ 06-00 ರಿಂದ 07-00 ಗಂಟೆ ಸಮಯದಲ್ಲಿ ಜರುಗಿಸಿ ನಾನು, ಚಾಸಾ-2 ರಿಂದ 4 ರವರು ಸಹಿಯನ್ನು ಮಾಡಿರುತ್ತೇವೆ. ನಂತರ ಸದರಿ 96 ಮದ್ಯದ ಟೆಟ್ರಾ ಪ್ಯಾಕೇಟ್ ಗಳಲ್ಲಿ 30 ಟೆಟ್ರಾ ಪ್ಯಾಕೇಟ್ ಗಳನ್ನು ರಾಸಾಯನಿಕ ಪರೀಕ್ಷೆಗೆ ಕಳುಹಿಸಲು ಬಿಳಿಚೀಲದಲ್ಲಿ ಹಾಕಿ ಎಸ್ ಹೆಚ್ ಓ ಎಂದು ಅರಗು ಸೀಲು ಮಾಡಿ ನನ್ನ ಮತ್ತು ಪಂಚರ ಸಹಿಯುಳ್ಳ ಚೀಟಿಯನ್ನು ಅಂಟಿಸಿರುತ್ತೇನೆ. ನಂತರ ಸರ್ಕಾರದ ಪರವಾಗಿ ನಾನೇ ದೂರನ್ನು ಸಲ್ಲಿಸಿರುತ್ತೇನೆ. ನಂತರ ಪ್ರಥಮ ವರ್ತಮಾನ ವರದಿಯನ್ನು ದಾಖಲು ಮಾಡಿ ಮೇಲಾಧಿಕಾರಿಗಳಿಗೆ ಮತ್ತು ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ ಮತ್ತು ಸದರಿ ಮದ್ಯದ ಪೌಚ್ ಗಳನ್ನು ಸ್ವತ್ತಿನ ಪಟ್ಟಿಯಲ್ಲಿ ನಮೂದು ಮಾಡಿ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ಉಳಿದ 66 ಟೆಟ್ರಾ ಪ್ಯಾಕೇಟ್ ಗಳನ್ನು ನಮ್ಮ ಮೇಲಾಧಿಕಾರಿಗಳಿಂದ ಅನುಮತಿ ಪಡೆದುಕೊಂಡು ನಾಶಪಡಿಸಿರುತ್ತೇನೆ. ನಂತರ ಕಡತವನ್ನು ಮುಂದಿನ ತನಿಖೆಗಾಗಿ ಚಾಸಾ-8 ರವರಿಗೆ ಹಸ್ತಾಂತರಿಸಿರುತ್ತೇನೆ. ನ್ಯಾಯಾಲಯದ ಮುಂದಿರುವ ಆರೋಪಿ ಮತ್ತು 30 ಟೆಟ್ರಾ ಪ್ಯಾಕೇಟ್ ಗಳನ್ನು ಸಾಕ್ಷಿ

ನೋಡಿ ಗುರುತಿಸಿರುತ್ತಾರೆ. ನ್ಯಾಯಾಲಯದ ಮುಂದಿರುವ ಖಾಲಿ 30 ಟೆಟ್ರಾ ಪ್ಯಾಕೇಟ್ ಗಳನ್ನು ಮು.ಮಾ.1 ಎಂದು ಗುರುತಿಸಲಾಯಿತು.

ಮಹಜರ್ ಅನ್ನು ಈಗಾಗಲೇ ನಿಪಿ-1 ಎಂದು, ಸಾಕ್ಷಿಯ ಸಹಿಯನ್ನು ನಿಪಿ-1(ಸಿ) ಎಂದು, ಶೋಧನಾ ಸಮುಚ್ಚಿತ ವಾರೆಂಟನ್ನು ಈಗಾಗಲೇ ನಿಪಿ-2 ಎಂದು, ಸಾಕ್ಷಿಯ ಸಹಿಯನ್ನು ನಿಪಿ-2(ಸಿ) ಎಂದು, ಚಾಸಾ-2 ರವರಿಗೆ ನೀಡಿದ ನೋಟೀಸನ್ನು ಈಗಾಗಲೇ ನಿಪಿ-3 ಎಂದು, ಸಾಕ್ಷಿಯ ಸಹಿಯನ್ನು ನಿಪಿ-3(ಬಿ) ಎಂದು,ಸ್ವತ್ತಿನ ಪಟ್ಟಿಯನ್ನು ಈಗಾಗಲೇ ನಿಪಿ-4 ಎಂದು, ಸಾಕ್ಷಿಯ ಸಹಿಯನ್ನು ನಿಪಿ-4(ಸಿ) ಎಂದು, ಮಾದರಿ ಮೊಹರಿನ ನಕಲನ್ನು ಈಗಾಗಲೇ ನಿಪಿ-5 ಎಂದು, ಸಾಕ್ಷಿಯ ಸಹಿಯನ್ನು ನಿಪಿ-5(ಸಿ) ಎಂದು, ಚಾಸಾ-3 ರವರಿಗೆ ನೀಡಿದ ನೋಟೀಸನ್ನು ಈಗಾಗಲೇ ನಿಪಿ-7 ಎಂದು, ಸಾಕ್ಷಿಯ ಸಹಿಯನ್ನು ನಿಪಿ-7(ಬಿ) ಎಂದು, ಪ್ರಥಮ ವರ್ತಮಾನ ವರದಿಯನ್ನು ನಿಪಿ-11 ಎಂದು, ಸಾಕ್ಷಿಯ ಸಹಿಯನ್ನು ನಿಪಿ-11(ಎ) ಎಂದು, ದೂರನ್ನು ನಿಪಿ-12 ಎಂದು, ಸಾಕ್ಷಿಯ ಸಹಿಯನ್ನು ನಿಪಿ-12(ಎ) ಎಂದು, ಮೇಲಾಧಿಕಾರಿಗಳಿಗೆ ಈ ಪ್ರಕರಣದಲ್ಲಿ ಅಮಾನತ್ತು ಪಡಿಸಿಕೊಂಡ ಮುದ್ದೆ ಮಾಲುಗಳನ್ನು ನಮ್ಮ ಬಳಿ ಇರಿಸಿಕೊಳ್ಳಲು ಸಲ್ಲಿಸಿದ ಮನವಿಯನ್ನು ನಿಪಿ-13 ಎಂದು, ಸಾಕ್ಷಿಯ ಸಹಿಯನ್ನು ನಿಪಿ-13(ಎ) ಎಂದು, ಸದರಿ ಮುದ್ದೆ ಮಾಲುಗಳನ್ನು ನಮ್ಮ ವಶದಲ್ಲಿ ಇರಿಸಿಕೊಳ್ಳಲು ನಮ್ಮ ಮೇಲಾಧಿಕಾರಿಗಳು ನೀಡಿದ ಅನುಮತಿಯನ್ನು ನಿಪಿ-14 ಎಂದು, ಸಾಕ್ಷಿಯ ಸಹಿಯನ್ನು ನಿಪಿ-14(ಎ) ಎಂದು ಗುರುತಿಸಲಾಯಿತು.

<u>ಪಾಟೀ ಸವಾಲು :- ಆರೋಪಿ ಪರ ವಕೀಲರರಿಂದ :-</u>

ಈ ಪ್ರಕರಣದಲ್ಲಿ ಆರೋಪಿಯು ಮದ್ಯವನ್ನು ಮಾರಾಟ ಮಾಡುವ ಬಗ್ಗೆ ಯಾವುದೇ ಮಾಹಿತಿಯನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ನಮ್ಮ ಠಾಣೆಯಲ್ಲಿ ಮಹಜರ್ ಕ್ರಮವನ್ನು ಜರುಗಿಸಿದ್ದೇವೆ ಎಂದರೆ ಸರಿಯಲ್ಲ. ಆರೋಪಿಗೂ ಮು.ಮಾ.1 ಕ್ಕೂ ಯಾವುದೇ ಸಂಬಂಧ ಇಲ್ಲದಿದ್ದರೂ ಸಹ ನಮ್ಮ ಠಾಣೆಯಲ್ಲಿದ್ದ ಬೇನಾಮಿ ಮಾಲನ್ನು ಈ ಪ್ರಕರಣದಲ್ಲಿ ಸೇರಿಸಿ ಸುಳ್ಳು ಪ್ರಕರಣವನ್ನು ದಾಖಲು ಮಾಡಿದ್ದೇವೆ ಎಂದರೆ ಸರಿಯಲ್ಲ. ಮು.ಮಾ.1 ಸಾಮಾನ್ಯವಾಗಿ ಎಲ್ಲಾ ಮದ್ಯದ ಅಂಗಡಿಗಳಲ್ಲಿ ದೊರೆಯುತ್ತದೆ ಎಂದರೆ ಸರಿ.

ಆರೋಪಿಗೂ ಈ ಪ್ರಕರಣಕ್ಕೂ ಯಾವುದೇ ಸಂಬಂಧ ಇಲ್ಲದಿದ್ದರೂ ಸಹ ಸುಳ್ಳು ಪ್ರಕರಣವನ್ನು ದಾಖಲು ಮಾಡಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದಾಖಲೆಗಳನ್ನು ಈ ಪ್ರಕರಣಕ್ಕೋಸ್ಕರ ನಮ್ಮ ಕಚೇರಿಯಲ್ಲಿಯೇ ಸೃಷ್ಟಿ ಮಾಡಿದ್ದೇನೆ ಎಂದರೆ ಸರಿಯಲ್ಲ. ನ್ಯಾಯಾಲಯದ ಮುಂದಿರುವ ಆರೋಪಿಯನ್ನು ಇದೇ ಮೊದಲ ಬಾರಿಗೆ ನೋಡುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ .

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.